**ಸಾಕ್ಷಿಯನ್ನು ಕರೆಯಿಸಿ ಸತ್ಯ ಭೋದನೆ ಮಾಡಿ ಪ್ರಮಾಣೀಕರಿಸಿದ ದಿನಾಂಕ 25.07.2024.**

**ಮುಖ್ಯ ವಿಚಾರಣೆ : ಶ್ರೀ ಆರ್.ಸಿ. ವಾದಿ ಪರ ವಕೀಲರಿಂದ**

ನನ್ನ ಮುಖ್ಯ ವಿಚಾರಣೆ ಭಾಗವಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆ. ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನನ್ನ ತಂದೆ ಎನ್.ಎನ್. ಅಶ್ವತ್ಥಪ್ಪ ಮೃತರಾಗಿದ್ದಾರೆ. ಅವರು ವ್ಯವಸಾಯಗಾರರಾಗಿದ್ದರು. ನನ್ನ ತಂದೆ ದಾಖಲೆಗಳಿಗೆ ಸಹಿ ಮಾಡುತ್ತಿದ್ದರು ಎಂದು ನುಡಿಯುತ್ತಾರೆ. ನನ್ನ ತಂದೆ ಸಹಿ ಮಾಡುತ್ತಿದ್ದುದನ್ನು ನಾನು ನೋಡಿರುತ್ತೇನೆ ಮತ್ತು ನನ್ನ ತಂದೆಯ ಸಹಿಯನ್ನು ನಾನು ಗುರುತಿಸಬಲ್ಲೆ ಎಂದು ನುಡಿಯುತ್ತಾರೆ.

ಈ ಹಂತದಲ್ಲಿ ಸಾಕ್ಷಿಗೆ ನಿಪಿ-1 ದಿನಾಂಕ 02.12.1987 ರ ಪ್ರತಿಯನ್ನು ನೋಡಿ ಅದರಲ್ಲಿ ಇರುವ ಎಂ.ಎನ್. ಅಶ್ವತ್ಥಪ್ಪರವರ ಸಹಿಯು ತನ್ನ ತಂದೆಗೆ ಸೇರಿದ್ದು ಎಂದು ನುಡಿದಿದ್ದು, ಅದನ್ನು **ನಿಪಿ-1(ಎ)** ಎಂದು ಗುರುತಿಸಲಾಯಿತು.

ಆದುದರಿಂದ, ವಾದಿಯ ದಾವೆಯನ್ನು ಡಿಕ್ರಿಗೊಳಿಸಬೇಕೆಂದು ಪ್ರಾರ್ಥಿಸುತ್ತೇನೆ.

**ಪಾಟೀ ಸವಾಲು : ಶ್ರೀ ಹೆಚ್.ಹೆಚ್. ಪ್ರತಿವಾದಿ ಪರ ವಕೀಲರಿಂದ**

ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಗೌರಿಬಿದನೂರು.